## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗಳಲ್ಲಿ ಹೆಚ್ಚುವರಿ ವೆಚ್ಚವನ್ನು ಮಂಜೂರು ಮಾಡಲು ಸಮಿತಿ ರಚನೆ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಕಡತ ಸಂ:ಗ್ರಾಅಪ 951 ಗ್ರಾಕುನೀ&ನೈಇ 2017-18.

----

**ಪೀಠಿಕೆ:**

ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡುವಾಗ ವೆಚ್ಚವು ಅನುಮೋದಿತ ಮೊತ್ತಕ್ಕಿಂತ ಹೆಚ್ಚಾಗುವ ಸಂಭವವಿರುತ್ತದೆ. ಇಂತಹ ಸಂದರ್ಭಗಳಲ್ಲಿ ಹೆಚ್ಚುವರಿಯಾಗುವ ಮೊತ್ತಕ್ಕೆ ಪರಿಶೀಲಿಸಿ ಅನುಮೋದನೆ ನೀಡಲು ಒಂದು ಸಮಿತಿಯನ್ನು ರಚಿಸುವುದು ಅವಶ್ಯಕವಾಗಿರುತ್ತದೆ. ಬಹುಗ್ರಾಮ ಕುಡಿಯುವ ನೀರಿನ ಕಾಮಗಾರಿಗಳಲ್ಲಿ ಹೆಚ್ಚುವರಿ ವೆಚ್ಚವನ್ನು ಮಂಜೂರು ಮಾಡುವ ಮೊದಲು ಸಮಿತಿಯ ಪರಿಶೀಲನೆ ನಂತರ ಮಂಜೂರು ಮಾಡಲು ತೀರ್ಮಾನಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ:ಗ್ರಾಅಪ 38 ಗ್ರಾನೀಸ(5)2018 ಬೆಂಗಳೂರು, ದಿನಾಂಕ: 20.08.2018.**

ಪೀಠಿಕೆಯಲ್ಲಿನ ಅಂಶಗಳ ಹಿನ್ನೆಲೆಯಲ್ಲಿ, ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಲ್ಲಿ ಹೆಚ್ಚುವರಿ ವೆಚ್ಚವನ್ನು ಮಂಜೂರು ಮಾಡುವ ಮೊದಲು ಸಮಿತಿಯ ಪರಿಶೀಲನೆಗೆ ಒಳಪಡಿಸಿ ಸಮಿತಿಯ ತೀರ್ಮಾನದಂತೆ ಮುಂದಿನ ಕ್ರಮ ತೆಗೆದುಕೊಳ್ಳಲು ಅನುವಾಗುವಂತೆ ಈ ಕೆಳಕಂಡ ಸಮಿತಿ ರಚಿಸಿ ಆದೇಶ ಹೊರಡಿಸಲಾಗಿದೆ.

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಅಧ್ಯಕ್ಷರು |
| 2. | ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ | ಸದಸ್ಯರು |
| 3. | ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ | ಸದಸ್ಯ ಸಂಚಾಲಕರು |

2. ಮೇಲಿನ ಸಮಿತಿಯು ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಲ್ಲಿ ಹೆಚ್ಚುವರಿ ವೆಚ್ಚವನ್ನು ಪರಿಶೀಲಿಸಿ, ಒಪ್ಪಿಗೆ ನೀಡಿದ ನಂತರ ಮಂಜೂರು ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ಕರಿಯಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಯನ್ನು :**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.

3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
6. ರಾಜ್ಯದ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರುಗಳು,
7. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬೆಂಗಳೂರು.
11. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
12. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿಗಳು, RDW&SD ಕೇಂದ್ರ ಕಛೇರಿ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
14. ರಾಜ್ಯದ ಎಲ್ಲಾ (31) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಅಭಿಯಂತರರುಗಳು,
15. ಆಯುಕ್ತರು, RDW&SD ಇವರ ಆಪ್ತ ಸಹಾಯಕರಿಗೆ.
16. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
17. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
18. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
19. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
20. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
21. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.